	2009-2010	
1	Muslim Khabrasthan & Dargah Hazrath Allaauddin Baba Sunni Basavakalyan Tq.	1.00
2	Rajola Village, Muslim Khabrasthan Basavakalyan Tq.	1.00
	TOTAL	**2.00**

ಹಾಲಕ್ಕಿ ಒಕ್ಕಲಿಗರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದು

381 (613) ಶ್ರೀ ದಿನಕರ ಕೇಶವ ಶೆಟ್ಟಿ (ಕುಮಟಾ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿರುವ ಹಾಲಕ್ಕಿ ಒಕ್ಕಲಿಗರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಹಿಂದಿನ ಸಚಿವ ಸಂಪುಟದ ನಿರ್ಣಯವನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ; ಹಾಗಿದ್ದಲ್ಲಿ ಯಾವಾಗ ಸಲ್ಲಿಸಲಾಯಿತು;

ಆ) ಉತ್ತರ ಕನ್ನಡ ಜಿಲ್ಲೆಯಲ್ಲಿರುವ ಹಾಲಕ್ಕಿ ಒಕ್ಕಲಿಗರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ವಿಷಯದಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಗಿರುವ ತೊಂದರೆಗಳೇನು;

ಇ) ಈ ವಿಚಾರದಲ್ಲಿ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದೊಡನೆ ಸಮಾಲೋಚನೆ ನಡೆಸಿದೆಯೇ;

ಈ) ಹಾಗಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು; (ವಿವರಗಳನ್ನು ನೀಡುವುದು)?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಹಾಲಕ್ಕಿ ಒಕ್ಕಲು ಜಾತಿಯನ್ನು ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿ ಸೇರಿಸುವ ಸಲುವಾಗಿ ಪತ್ರ ಸಂಖ್ಯೆ:ಸಕಇ 27 ಎಸ್‌ಎಡಿ 2007, ದಿನಾಂಕ: 21-10-2009ರಲ್ಲಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಆ) ಇ) ಮತ್ತು ಈ) :

ಯಾವುದೇ ಜಾತಿಯನ್ನು ಹೊಸದಾಗಿ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಕೇಂದ್ರ ಸರ್ಕಾರ ಮಾತ್ರ ಅಧಿಕಾರ ಹೊಂದಿರುತ್ತದೆ. ಆದಕಾರಣ ಕೇಂದ್ರ ಸರ್ಕಾರ ತೆಗೆದುಕೊಳ್ಳಲಿರುವ ತೀರ್ಮಾನವನ್ನು ಕಾಯಲಾಗುತ್ತಿದೆ.